**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 1 ಎಸ್‌ಎಂಆರ್ 2005

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 23.02.2013

**ಸುತ್ತೋಲೆ**

**ವಿಷಯ:-** ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ವೈದ್ಯಕೀಯ ಚಿಕಿತ್ಸೆ ಪಡೆಯಲು ಸರ್ಕಾರ ಮಾನ್ಯತೆ ನೀಡಿ ಗುರುತಿಸಿರುವ ಖಾಸಗಿ ಆಸ್ಪತ್ರೆಗಳು ಹೆಚ್ಚಿನ ದರ ವಿಧಿಸುತ್ತಿರುವ ಬಗ್ಗೆ.

**ಉಲ್ಲೇಖ:-** 1) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 1 ಎಸ್‌ಎಂಆರ್ 2000, ದಿನಾಂಕ: 22.01.2001.
2) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 1 ಎಸ್‌ಎಂಆರ್ 2003, ದಿನಾಂಕ: 18.07.2003.
3) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 2 ಎಸ್‌ಎಂಆರ್ 2008, ದಿನಾಂಕ: 24.10.2009.

* * *

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರಲ್ಲಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರು ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ರಾಜ್ಯ ಸರ್ಕಾರಿ ನೌಕರರ ಚಿಕಿತ್ಸೆಗಾಗಿ ಮಾನ್ಯ ಮಾಡಿ ಗುರುತಿಸಿರುವ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ಮರುಪಾವತಿಸಿಕೊಳ್ಳುವ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ರಾಜ್ಯ ಸರ್ಕಾರಿ ನೌಕರರ ಚಿಕಿತ್ಸೆಗಾಗಿ ಮಾನ್ಯ ಮಾಡಿ ಗುರುತಿಸಿರುವ ಖಾಸಗಿ ಆಸ್ಪತ್ರೆಗಳಲ್ಲಿ ಕೆಲವು ಖಾಸಗಿ ಆಸ್ಪತ್ರೆಗಳು ನೀಡುವ ಚಿಕಿತ್ಸೆಯ ದರಗಳನ್ನು ಉಲ್ಲೇಖ-1ರ ದಿನಾಂಕ: 22.01.2001ಅಧಿಸೂಚನೆಯಲ್ಲಿ ನಿಗಧಿಪಡಿಸಲಾಗಿದ್ದು, ನಂತರ ಉಲ್ಲೇಖ-3ರ ದಿನಾಂಕ: 24.10.2009ರ ಅಧಿಸೂಚನೆಯಲ್ಲಿ ಈಗಾಗಲೇ ನಿಗಧಿಪಡಿಸಲಾದ ದರಗಳಿಗೆ ಬದಲಾಗಿ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಕೇಂದ್ರ ಸರ್ಕಾರದ ಆರೋಗ್ಯ ಸೇವೆಗಳು (CGHS) ಅಡಿಯಲ್ಲಿ ಕಾಲಕಾಲಕ್ಕೆ ವಿವಿಧ ರೋಗ ನಿರ್ಣಯ ವಿಧಾನಗಳಿಗೆ ಮತ್ತು ಚಿಕಿತ್ಸೆಗಳಿಗೆ ನಿಗಧಿಪಡಿಸಿರುವ/ನಿಗಧಿಪಡಿಸುವ ದರಗಳನ್ನು ಅಳವಡಿಸಿಕೊಳ್ಳಲಾಗಿರುತ್ತದೆ.

ಖಾಸಗಿ ಆಸ್ಪತ್ರೆಗಳು ಸರ್ಕಾರದಿಂದ ಮಾನ್ಯತೆ ಪಡೆದುಕೊಳ್ಳುವಾಗ ಸರ್ಕಾರವು ನಿಗಧಿಪಡಿಸಿರುವ ದರಗಳನುಸಾರ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದವರಿಗೆ ಚಿಕಿತ್ಸೆಯನ್ನು ನೀಡುವುದಾಗಿ ಮುಚ್ಚಳಿಕೆ ಪತ್ರದಲ್ಲಿ (Proforma Agreement) ಒಪ್ಪಿಗೆಯನ್ನು ನೀಡುತ್ತಿದ್ದು, ಇದರಂತೆ ದರಗಳನ್ನು ವಿಧಿಸಬೇಕಾಗಿರುತ್ತದೆ. ಆದರೆ ಕೆಲವು ಖಾಸಗಿ ಆಸ್ಪತ್ರೆಗಳು ಪ್ರಸ್ತುತ ನಿಗಧಿಪಡಿಸಿರುವ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಕೇಂದ್ರ

ಸರ್ಕಾರದ ಆರೋಗ್ಯ ಸೇವೆಗಳ (CGHS) ದರಗಳನ್ನು ವಿಧಿಸದೇ ಹೆಚ್ಚಿನ ದರಗಳನ್ನು ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಪರಿಶೀಲಿಸಲಾಗಿ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರು ಚಿಕಿತ್ಸೆಗಾಗಿ ಮಾನ್ಯ ಮಾಡಿ ಗುರುತಿಸಿರುವ ಖಾಸಗಿ ಆಸ್ಪತ್ರೆಗಳಲ್ಲಿ ದಾಖಲಾಗುವ ಸಂಧರ್ಭದಲ್ಲಿ ತಾವು ಸರ್ಕಾರಿ ನೌಕರರು ಅಥವಾ ಸರ್ಕಾರಿ ನೌಕರರ ಅವಲಂಬಿತರು ಎಂದು ತಿಳಿಸುತ್ತಿಲ್ಲವೆಂದು ತಿಳಿದು ಬಂದಿರುತ್ತದೆ.

ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರು ಪಡೆಯುವ ವೈದ್ಯಕೀಯ ಚಿಕಿತ್ಸೆಗಾಗಿ ಸರ್ಕಾರವು ಮಾನ್ಯ ಮಾಡಿ ಗುರುತಿಸಿರುವ ಖಾಸಗಿ ಆಸ್ಪತ್ರೆಗಳಲ್ಲಿ ದಾಖಲಾಗುವ ಸಂಧರ್ಭದಲ್ಲಿ, ಸರ್ಕಾರಿ ನೌಕರರು ಅಥವಾ ಸರ್ಕಾರಿ ನೌಕರರ ಅವಲಂಬಿತರು ಎಂದು ಸ್ಪಷ್ಟವಾಗಿ ತಿಳಿಸಬೇಕಾಗುತ್ತದೆ. ಅದರ ಆಧಾರದ ಮೇಲೆ ಸಂಬಂಧಿಸಿದ ಆಸ್ಪತ್ರೆಗಳು CGHS ದರದನ್ವಯ ಚಿಕಿತ್ಸಾ ವೆಚ್ಚಕ್ಕೆ ಬಿಲ್ಲುಗಳನ್ನು ನೀಡಲು ಅನುಕೂಲವಾಗುತ್ತದೆ. CGHS ದರಕ್ಕಿಂತ ಹೆಚ್ಚಿನ ದರವನ್ನು ವಿಧಿಸಿದಲ್ಲಿ ಸಂಬಂಧಿಸಿದ ಸರ್ಕಾರಿ ನೌಕರರುಗಳು ತಮ್ಮ ಇಲಾಖಾ ಮುಖ್ಯಸ್ಥರ ಮೂಲಕ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-560 009 ಇವರ ಗಮನಕ್ಕೆ ತರುವಂತೆ ಈ ಮೂಲಕ ಸೂಚಿಸಿದೆ.

ಮೇಲ್ಕಂಡ ಸೂಚನೆಗಳನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿ / ನೌಕರರ ಗಮನಕ್ಕೆ ತರಬೇಕೆಂದು ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಈ ಮೂಲಕ ಸೂಚಿಸಲಾಗಿದೆ.

**(ಸಂಜೀವ್ ಕುಮಾರ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

**ಇವರಿಗೆ :**

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಹೊರ ವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು – ಇದನ್ನು ಕರ್ನಾಟಕ ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು), ಕೊಠಡಿ ಸಂಖ್ಯೆ: 30, ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸಲು. **(ಮುಖ ಪತ್ರದೊಂದಿಗೆ)**

**ಪ್ರತಿಗಳು :**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
2. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
3. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
5. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ವಿಧಾನ ಸೌಧ, ಬೆಂಗಳೂರು.

. . . . 3

6. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯಪುರಿ, ನವದೆಹಲಿ-11.
7. ಸರ್ಕಾರದ ಎಲ್ಲಾ ಅಪರ/ಸಹ/ಉಪ/ಅಧೀನ ಕಾರ್ಯದರ್ಶಿಗಳು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
11. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
12. ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು.
13. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
14. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬಿಡಿಎ ವಾಣಿಜ್ಯ ಸಂಕೀರ್ಣ, ಇಂದಿರಾನಗರ, ಬೆಂಗಳೂರು-38.
15. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
16. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
17. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
19. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.